## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** M/s Bijapur Renewable Energy India Private Limited ಕಂಪನಿಯವರಿಗೆ ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಹಂಚಿಕೆ ನೀಡುವ ಬಗ್ಗೆ.

**ಓದಲಾಗಿದೆ:**
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: 1784–ಬಿ
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ: 23.01.2019 ರ ಹಂಚಿಕೆ ಸಮಿತಿ ಸಭೆ ನಡವಳಿಗಳು.

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್ ರವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ, M/s Bijapur Renewable Energy India Private Limited ಕಂಪನಿಯವರಿಗೆ ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ಎರಮಲ್ಲನಹಳ್ಳಿ ಮತ್ತು ನಿಂಬಲಗಿರಿ ಗ್ರಾಮಗಳಲ್ಲಿ 5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಹಂಚಿಕೆ ನೀಡುವಂತೆ ಕೋರಿದ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, M/s Bijapur Renewable Energy India Private Limited ಕಂಪನಿಯು M/s SML Electricals India Private Limited ಅಂಗ ಸಂಸ್ಥೆಯಾಗಿರುತ್ತದೆ. ಸದರಿಯವರ ನೆಟ್‌ವರ್ತ್ ದಿನಾಂಕ:31.03.2017 ರ ಅಂತ್ಯಕ್ಕೆ ರೂ.58.95 ಕೋಟಿಗಳಾಗಿರುತ್ತದೆ ಎಂದು ಚಾರ್ಟೆಡ್ ಅಕೌಂಟೆಂಟ್ ರವರು ದೃಢೀಕರಣ ಪತ್ರವನ್ನು ಸಲ್ಲಿಸಿರುವುದಾಗಿ ತಿಳಿಸಿರುತ್ತಾರೆ ಹಾಗೂ ಸದರಿ ಕಂಪನಿಯ Registrar of Companies, Ministry of Corporate Affairs, Government of India, Bangalore ಇಲ್ಲಿ ದಿನಾಂಕ:08.06.2018 ರಂದು CIN ಸಂಖ್ಯೆ U74999KA2018PTC113770 ರನ್ವಯ ನೋಂದಣಿಯಾಗಿರುತ್ತದೆ. ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಸ್ವಂತ ಉಪಯೋಗಕ್ಕಾಗಿ / ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಷರತ್ತಿನೊಂದಿಗೆ M/s Bijapur Renewable Energy India Private Limited ಕಂಪನಿಯವರಿಗೆ ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ಎರಮಲ್ಲನಹಳ್ಳಿ ಮತ್ತು ನಿಂಬಲಗಿರಿ ಗ್ರಾಮಗಳಲ್ಲಿ 5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ ಹಂಚಿಕೆ ಮಾಡುವ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಹಂಚಿಕೆ ಸಮಿತಿ ಮುಂದೆ ಮಂಡಿಸಲು ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

...2)

Geographical area description for 5 MW capacity wind power project of
M/s Bijapur Renewable Energy India Private Limited

| Proposed capacity in MW | Village/ Taluk/District | Geographical area description of the project |
|---|---|---|
| 5 MW<br><br>(4 Nos x 1250 kW) | Erramallanahalli & Nimbalagiri villages of Kudligi taluk, Ballari district | The identified area is covered by Private land Nimbalagiri and Erramallanahalli villages. The area is having several peaks and is covered in the following Geographical co-ordinates as:<br><br>A: Latitude:14°40'47.74N Longitude:76°20'37.06''E<br>B: Latitude:14°41'3.80''N Longitude:76°20'37.14''E<br>C: Latitude:14°41'52.54"N Longitude:76°21'40.68''E<br>D: Latitude:14°42'56.7''N Longitude:76°21'26.1''E<br>E: Latitude:14°41'53.77''N Longitude:76°23'15.57''E<br>F: Latitude:14°41'1.75''N Longitude:76°23'20.47''E<br>G: Latitude:14°40'31.11''N Longitude:76°22'41.48''E<br><br>Peaks: 657 and 656<br>Toposheet No: 57 B/6 |
| 5 MW | | |

ಮೇಲೆ ಓದಲಾದ ಕ್ರಮ ಸಂಖ್ಯೆ: (2) ದಿನಾಂಕ: 23.01.2019 ರಂದು ನಡೆದ ಹಂಚಿಕೆ ಸಮಿತಿ ಸಭೆಯಲ್ಲಿ M/s Bijapur Renewable Energy India Private Limited ಕಂಪನಿಯವರಿಗೆ ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ಎರಮಲ್ಲನಹಳ್ಳಿ ಮತ್ತು ನಿಂಬಲಗಿರಿ ಗ್ರಾಮಗಳಲ್ಲಿ 5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಪ್ರಸ್ತಾವನೆಗೆ ಸಮಿತಿಯು ಸದರಿ ಕಂಪನಿಯವರು ಸ್ಥಾಪಿಸಲು ಉದ್ದೇಶಿಸಿರುವ ಸ್ಥಳವು ಖಾಸಗಿ ಜಮೀನಾಗಿರುವುದನ್ನು ಪರಿಗಣಿಸಿ, ಸದರಿ ಪವನ ವಿದ್ಯುತ್ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು 3ನೇ ವ್ಯಕ್ತಿಗೆ ಮಾರಾಟ ಮಾಡುವ ಷರತ್ತಿಗೊಳಪಟ್ಟು 5 ಮೆ.ವ್ಯಾ ಸಾಮರ್ಥ್ಯಕ್ಕೆ ಹಂಚಿಕೆ ನೀಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ : ಇಎನ್ 638 ಎನ್‌ಸಿಇ 2018, ಬೆಂಗಳೂರು, ದಿನಾಂಕ:24.12.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, M/s Bijapur Renewable Energy India Private Limited ಕಂಪನಿಯವರಿಗೆ ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ಎರಮಲ್ಲನಹಳ್ಳಿ ಮತ್ತು ನಿಂಬಲಗಿರಿ ಗ್ರಾಮಗಳಲ್ಲಿ 5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಷರತ್ತಿನೊಂದಿಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

...3)

Geographical area description for 5 MW capacity wind power project of
M/s Bijapur Renewable Energy India Private Limited

| **Proposed capacity in MW** | **Village/ Taluk/District** | **Geographical area description of the project** |
|---|---|---|
| 5 MW<br>(4 Nos x 1250 kW) | Erramallanahalli & Nimbalagiri villages of Kudligi taluk, Ballari district | The identified area is covered by Private land Nimbalagiri and Erramallanahalli villages. The area is having several peaks and is covered in the following Geographical co-ordinates as:<br>A: Latitude:14°40'47.74N Longitude:76°20'37.06''E<br>B: Latitude:14°41'3.80''N Longitude:76°20'37.14''E<br>C: Latitude:14°41'52.54''N Longitude:76°21'40.68''E<br>D: Latitude:14°42'56.7''N Longitude:76°21'26.1''E<br>E: Latitude:14°41'53.77''N Longitude:76°23'15.57''E<br>F: Latitude:14°41'1.75''N Longitude:76°23'20.47''E<br>G: Latitude:14°40'31.11''N Longitude:76°22'41.48''E<br>Peaks: 657 and 656<br>Toposheet No: 57 B/6 |
| 5 MW | | |

**ಷರತ್ತುಗಳು:-**

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ: ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗಧಿಪಡಿಸಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಕೆ.ಪಿ.ಟಿ.ಸಿ.ಎಲ್ ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

...4)